ಕರ್ನಾಟಕ ಸರ್ಕಾರ

ಕ್ರಮಾಂಕ: ಇಡಿ 164 ಯುಬಿವಿ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:07.08.2018

ಇಂದ
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು – 560001.

ಇವರಿಗೆ
ಕುಲಸಚಿವರು,
ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ,
ಸೆಂಟ್ರಲ್ ಕಾಲೇಜು ಆವರಣ, ಬೆಂಗಳೂರು

ಮಾನ್ಯರೆ,

ವಿಷಯ:– ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ ಪ್ರಾದೇಶಿಕ ಅಧಿಕಾರ ವ್ಯಾಪ್ತಿಗೊಳಪಡುವ ಸಿಂಧಿ ಇನ್ಸಿಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಇಲ್ಲಿ 2018–19ನೇ ಸಾಲಿನಿಂದ ಹೊಸದಾಗಿ ವ್ಯಾಸಂಗಕ್ರಮಗಳನ್ನು ಆರಂಭಿಸಲು ಸಂಯೋಜನೆ ನೀಡುವ ಕುರಿತು.

ಉಲ್ಲೇಖ:– ತಮ್ಮ ಪತ್ರ ಸಂಖ್ಯೆ:ಬೆ.ಕೇ.ವಿ.ಕು.ಸ.ಕಾ/ಹೊಕೋಪ್ರ/2018–19, ದಿ:22.06.2018.

---

ಸಿಂಧಿ ಸೇವಾ ಸಮಿತಿ, ಕುಮಾರಕೃಪಾ, ಬೆಂಗಳೂರು ವತಿಯಿಂದ ನಂ:33/2ಬಿ, ಕೆಂಪಾಪುರ, ಹೆಬ್ಬಾಳ, ಬೆಂಗಳೂರು–560 024 ಇಲ್ಲಿ ನಡೆಸಲಾಗುತ್ತಿರುವ ಸಿಂಧಿ ಇನ್ಸಿಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಇಲ್ಲಿ ಹೊಸದಾಗಿ ಎಂ.ಬಿ.ಎ. ವ್ಯಾಸಂಗಕ್ರಮವನ್ನು 2018–19ನೇ ಸಾಲಿನಿಂದ ಪ್ರಾರಂಭಿಸಲು ಸಂಯೋಜನೆ ನೀಡುವ ಬಗ್ಗೆ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000 ಪ್ರಕರಣ 59(10)ರನ್ವಯ ಕಾಲೇಜಿನ ಅರ್ಜಿ, ಸ್ಥಳೀಯ ವಿಚಾರಣೆ ಸಮಿತಿಯು ವರದಿ ಹಾಗೂ ಹಾಗೂ ಹಾಗೂ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ (ತಿದ್ದುಪಡಿ) ಅಧಿನಿಯಮ, 2015ರ 7ನೇ ಪ್ರಕರಣದನ್ವಯ ಪ್ರದತ್ತವಾದ ಅಧಿಕಾರದನ್ವಯ ಕುಲಪತಿಗಳ ಅನುಮೋದನೆಯೊಂದಿಗೆ ಉಲ್ಲೇಖಿತ ಪತ್ರದಲ್ಲಿ ಸಲ್ಲಿಸಲಾದ ಪ್ರಸ್ತಾವನೆಯನ್ನು ಸಂವೀಕ್ಷಿಸಲಾಗಿದೆ.

ಸ್ಥಳೀಯ ವಿಚಾರಣೆ ಸಮಿತಿಯ ಅವಲೋಕನೆ ಮತ್ತು ತೀರ್ಮಾನಗಳು ಹಾಗೂ ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಪರಿಗಣಿಸಿ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ(ತಿದ್ದುಪಡಿ) ಅಧಿನಿಯಮ, 2015ರ 7ನೇ ಪ್ರಕರಣದಡಿ ಪ್ರದತ್ತವಾದ ಅಧಿಕಾರದನ್ವಯ ಕುಲಪತಿಗಳು ಅನುಮೋದಿಸಿರುವ ಹಾಗೂ ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತಿನಿಂದ ಅನುಮತಿಸಿರುವ ಆಧಾರದ ಮೇಲೆ, **ಸಿಂಧಿ ಇನ್ಸಿಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್**, ನಂ:33/2ಬಿ, ಕೆಂಪಾಪುರ, ಹೆಬ್ಬಾಳ, ಬೆಂಗಳೂರು–560 024 ಇಲ್ಲಿ 2018–19ನೇ ಸಾಲಿನಿಂದ ಹೊಸದಾಗಿ ಈ ಕೆಳಕಂಡಂತೆ ಎಂ.ಬಿ.ಎ ಕೋರ್ಸ್‌ನ್ನು ಪ್ರಾರಂಭಿಸುವ ಸಂಬಂಧ ಈ ಕೆಳಕಂಡ ಸಂಯೋಜನಾ ಷರತ್ತು/ನಿಬಂಧನೆಗಳು ಸೇರಿದಂತೆ ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಷರತ್ತುಗಳಿಗೊಳಪಟ್ಟು ಸಂಯೋಜನೆ ನೀಡುವ ಕುರಿತು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000 ಪ್ರಕರಣ 59(11) ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಶಿಫಾರಸ್ಸು ಮಾಡಲಾಗಿದೆ ಎಂದು ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

| ವ್ಯಾಸಂಗಕ್ರಮ | ವಿಷಯ ಸಮೂಹ | ವಿದ್ಯಾರ್ಥಿ ಪ್ರವೇಶ ದಾಖಲಾತಿ ಪ್ರಮಾಣ |
|---|---|---|
| ಎಂ.ಬಿ.ಎ | ವಿಶ್ವವಿದ್ಯಾಲಯದ ಪರಿನಿಯಮಾವಳಿಗಳಂತೆ | 120(ಒಂದು ನೂರ ಇಪ್ಪತ್ತು) |

**ಷರತ್ತುಗಳು:–**

1) ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು;

--2

2) ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;
3) ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;
4) ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;
5) ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
6) ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗ ದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.
7) ದಿನಾಂಕ: 13-8-1997 ರಂದು ವಿಶಾಖ v/s ರಾಜಸ್ತಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;
8) ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಲಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು.
9) ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;
10) ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ.
11) ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ.
12) ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ತಮ್ಮ ನಂಬುಗೆಯ,

07/08/18

(ಎಂ.ಎ.ಅಹ್ಮದ್ ಜಾನ್)
ಸರ್ಕಾರದ ಅಧೀನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-2)

07/08/18

ಪ್ರತಿ:-1) ಕಾಲೇಜು ಶಿಕ್ಷಣ ಆಯುಕ್ತರು/ನಿರ್ದೇಶಕರು, ಬೆಂಗಳೂರು - 560001.

2) ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
3) ಪ್ರಾಂಶುಪಾಲರು, ಸಿಂಧಿ ಇನ್ಸಿಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್, ನಂ:33/2ಬಿ, ಕೆಂಪಾಪುರ, ಹೆಬ್ಬಾಳ, ಬೆಂಗಳೂರು-560 024